ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅನುಬಂಧ 2-3

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕ, 1997

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ.

"1997ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

4. ಕರ್ನಾಟಕ ಮೋಟಾರ್ ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ್ಕೆ 1997 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರ, 1997ನೇ ಸಾಲಿನ ಕರ್ನಾಟಕ ಮೋಟಾರ್ ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1997ರ ಕರ್ನಾಟಕ ಮೋಟಾರ್ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 1997-98ರ ಕರ್ನಾಟಕ ಮೋಟಾರ್ ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಯಿತು.

5. ಅ) ಪರ್ಯಾಯಲೋಚನ ಪ್ರಸ್ತಾಪ

1. ಕರ್ನಾಟಕ ಧನವಿನಿಯೋಗ (ಲೇಖಾನುಧಾನ) ವಿಧೇಯಕ 1997

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಸಿದ್ಧರಾಮಯ್ಯ (ಹಣಕಾಸಿನ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನವಿನಿಯೋಗ (ಲೇಖಾನುಧಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ ನಾನು ಕಳೆದ ಸಲ ಒಂದು ಸಲಹೆಯನ್ನು ಮಾಡಿದ್ದೆ. ಅದು ಏನೆಂದರೆ, ಈಗ ಒಟ್ಸ್ ಆನ್ ಅಕೌಂಟ್ಸ್‌ನ್ನು 6 ತಿಂಗಳಿಗೆ ತೆಗೆದುಕೊಳ್ಳುತ್ತೇವೆ. ಈ ಮಧ್ಯೆದಲ್ಲಿ ಯಾವುದೂ ಕೂಡ ಡೆವಲಪ್‌ಮೆಂಟ್ ವರ್ಕ್ಸ್ ಆಗುವುದಿಲ್ಲ. ಅದಕ್ಕಾಗಿ 6 ತಿಂಗಳಿಗೆ ಹಣವನ್ನು ಏನು ಅಪ್ರೂವಲ್ ತೆಗೆದುಕೊಳ್ಳುತ್ತೀರಿ, ಅಷ್ಟಕ್ಕಾದರೂ ಮಂಜೂರಾತಿಯನ್ನು ಕೊಡತಕ್ಕಂಥದ್ದನ್ನು ಮಾಡಿ ಅಡ್ಮಿನಿಸ್ಟ್ರೇಟೀವ್ ಅಪ್ರೊವಲ್‌ನ್ನು ಕೊಟ್ಟು ಕೆಲಸವನ್ನು ಪ್ರಾರಂಭ ಮಾಡಿಸುವುದಾದರೂ ಮಾಡಿ. ಇಲ್ಲ ಎಂದರೆ, ಏನಾಗುತ್ತದೆಂದರೆ 6 ತಿಂಗಳವರೆಗೆ ಒಂದು ಕೆಲಸ ನಡೆಯುವುದಿಲ್ಲ. ವರ್ಷದ ಕೊನೆಯಲ್ಲಿ ಡಿಸೆಂಬರ್, ಜನವರಿಯಲ್ಲಿ ನೀವು ಅಪ್ರೂವರ್‌ನ್ನು ಕೊಡುತ್ತೀರಿ ಇಟ್ಟಂತಹ ಹಣ ಖರ್ಚಾಗುವುದಿಲ್ಲ, ತೊಂದರೆಯಾಗುತ್ತದೆ. ಆದುದರಿಂದ ದಯವಿಟ್ಟು ಆ ದೃಷ್ಟಿಯಿಂದ ಏನಾದರೂ ಬದಲಾವಣೆಯನ್ನು ಮಾಡುತ್ತೀರೋ? ಇಲ್ಲ ಎಂದರೆ ಬರೀ ಮೂರು ತಿಂಗಳಿಗೆ ಕೇಳಿದ್ದರೆ ಒಂದು ರೀತಿಯಾಗಿ ಇನ್ನು 9 ತಿಂಗಳು ಆದರೂ ಇರುತ್ತಿತ್ತು. ಕೆಲಸವನ್ನು ಮಾಡುವುದಕ್ಕಾದರೂ ಅನುಕೂಲವಾಗುತ್ತಿತ್ತು.